**Bangalore**
**Regional News**
**14.08.2026 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ವಿಧಾನಸಭೆ ನೂತನ ಸಭಾಧ್ಯಕ್ಷರಾಗಿ ಜಿ.ಎಸ್.ಪಾಟೀಲ್ ಅವಿರೋಧ ಆಯ್ಕೆ : ಮೇಲ್ಮನೆ ಸಭಾಪತಿಯಾಗಿ ಸಲೀಂ ಅಹಮ್ಮದ್ ನೇಮಕ
2. ರಾಜ್ಯದ ಅಭಿವೃದ್ಧಿಗೆ ಆಡಳಿತ, ಪ್ರತಿಪಕ್ಷಗಳು ಒಟ್ಟಾಗಿ ಕಾರ್ಯ ನಿರ್ವಹಿಸುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ
3. ವಿಕಸಿತ ಭಾರತ್ ಜಿ ರಾಮ್ ಜಿ ಯಡಿ ಕೆಲಸ ಮಾಡಿದವರಿಗೆ ೧೫ ದಿನದಲ್ಲಿ ಕೂಲಿ ಹಣ ಪಾವತಿಸದಿದ್ದರೆ ಕ್ರಮ : ಸಚಿವ ಈಶ್ವರ್ ಖಂಡ್ರೆರಾಜ್ಯದ ೧೭ ಪೊಲೀಸ್ ಅಧಿಕಾರಿಗಳಿಗೆ ಪ್ರತಿಷ್ಠಿತ ರಾಷ್ಟ್ರಪತಿ ಪದಕ ಗೌರವ
4. ಮಹಿಳೆಯರಿಗೆ ಸಂಪುಟದಲ್ಲಿ ಸಿಗದ ಸ್ಥಾನ : ಸರ್ಕಾರದ ವಿರುದ್ಧ ವಿಧಾನಸೌಧದಲ್ಲಿ ಬಿಜೆಪಿ ಪ್ರತಿಭಟನೆ

<><><>

ವಿಧಾನಸಭೆಯ ನೂತನ ಸಭಾಧ್ಯಕ್ಷರಾಗಿ ಜಿ.ಎಸ್.ಪಾಟೀಲ್ ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ಬಳಿಕ ಸಂಪ್ರದಾಯದಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ವಿಪಕ್ಷ ನಾಯಕ ಆರ್.ಅಶೋಕ ನೂತನ ಸಭಾಧ್ಯಕ್ಷರನ್ನು ಕರೆತಂದು ಸಭಾಧ್ಯಕ್ಷ ಪೀಠದಲ್ಲಿ ಕೂರಿಸಿದರು. ಸದನ ಆರಂಭವಾಗುತ್ತಿದ್ದಂತೆಯೇ ಹಂಗಾಮಿ ಸಭಾಧ್ಯಕ್ಷ ಟಿ.ಬಿ.ಜಯಚಂದ್ರ, ವಿಧಾನಸಭಾಧ್ಯಕ್ಷರ ಚುನಾವಣೆ ಪ್ರಕ್ರಿಯೆಗೆ ಚಾಲನೆ ನೀಡಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿ.ಎಸ್.ಪಾಟೀಲ್ ಅವರ ಹೆಸರನ್ನು ವಿಧಾನಸಭಾಧ್ಯಕ್ಷ ಸ್ಥಾನಕ್ಕೆ ಪ್ರಸ್ತಾಪಿಸಿದರು. ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಪ್ರಸ್ತಾವನೆಯನ್ನು ಅನುಮೋದಿಸಿದರು. ಬಳಿಕ ಹಂಗಾಮಿ ಸಭಾಧ್ಯಕ್ಷರು ಪ್ರಸ್ತಾವನೆಯನ್ನು ಮತಕ್ಕೆ ಹಾಕಿ ಅಂಗೀಕಾರವಾದ ಬಳಿಕ ಜಿ.ಎಸ್.ಪಾಟೀಲ್ ಅವರನ್ನು ನೂತನ ವಿಧಾನಸಭಾಧ್ಯಕ್ಷರೆಂದು ಅಧಿಕೃತವಾಗಿ ಘೋಷಿಸಿದರು.

<><><>

ವಿಧಾನ ಪರಿಷತ್ತಿನ ನೂತನ ಸಭಾಪತಿಯಾಗಿ ಕಾಂಗ್ರೆಸ್‌ನ ಹಿರಿಯ ನಾಯಕ ಹಾಗೂ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್ ಆಯ್ಕೆಯಾಗಿದ್ದಾರೆ. ಪೀಠದಲ್ಲಿದ್ದ ಹಂಗಾಮಿ ಸಭಾಪತಿ ಪುಟ್ಟಣ್ಣ, ಸಭಾಪತಿ ಸ್ಥಾನಕ್ಕೆ ಆಯ್ಕೆ ಪ್ರಕ್ರಿಯೆ ಕೈಗೊಂಡಾಗ ಸದಸ್ಯ ಬಿ.ಕೆ. ಹರಿಪ್ರಸಾದ್, ಸಲೀಂ ಅಹ್ಮದ್

ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸಿದರು. ಸಭಾ ನಾಯಕ ಡಾ.ಯತೀಂದ್ರ ಸಿದ್ದರಾಮಯ್ಯ ಪ್ರಸ್ತಾವವನ್ನು ಅನುಮೋದಿಸಿದರು. ಸದಸ್ಯರಾದ ಎನ್.ಎಸ್.ಬೋಸರಾಜು, ಮಂಜುನಾಥ ಭಂಡಾರಿ, ಎ.ನಾಗರಾಜು ಯಾದವ್, ಐವಾನ್ ಡಿಸೋಜಾ ಅವರು ಸಲೀಂ ಅಹ್ಮದ್ ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯಾಗಿ ಚುನಾಯಿಸಬೇಕೆಂದು ಸೂಚಿಸಿದರು. ಸದಸ್ಯರಾದ ವಿನಯ್ ಕಾರ್ತಿಕ್ ಪ್ರಕಾಶ್, ವಸಂತ ಕುಮಾರ್, ಡಾ.ಡಿ.ತಿಮ್ಮಯ್ಯ, ಎಫ್.ಹೆಚ್.ಜಕ್ಕಪ್ಪ ನವರ್ ಅವರು ಪ್ರಸ್ತಾಪ ಅನುಮೋದಿಸಿದರು. ಇತ್ತ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಪಿ.ಹೆಚ್.ಪೂಜಾರ್ ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸಿದರು. ಜೆಡಿಎಸ್ ಸದಸ್ಯ ಎಸ್.ಎಲ್.ಭೋಜೇಗೌಡ ಪ್ರಸ್ತಾಪವನ್ನು ಅನುಮೋದಿಸಿದರು. ಸಭಾಪತಿ ಸ್ಥಾನಕ್ಕೆ ಒಟ್ಟು ಏಳು ಪ್ರಸ್ತಾವಗಳು ಬಂದಿದ್ದು, ಈ ಪೈಕಿ ಐದು ಪ್ರಸ್ತಾವಗಳು ಸಲೀಂ ಅಹ್ಮದ್ ಪರ ಬಂದಿದ್ದವು. ಬಳಿಕ ಹಂಗಾಮಿ ಸಭಾಪತಿ ಪುಟ್ಟಣ್ಣ ಅವರು ಪ್ರಸ್ತಾವವನ್ನು ಮತಕ್ಕೆ ಹಾಕಿದರು. ಧ್ವನಿಮತದ ಮೂಲಕ ನಡೆದ ಮತದಾನ ಪ್ರಕ್ರಿಯೆಯಲ್ಲಿ ಸಲೀಂ ಅಹ್ಮದ್ ಅವರ ಪರವಾಗಿ ಒಟ್ಟು ೩೮ ಮತಗಳು ಚಲಾವಣೆಯಾದರೆ, ವಿರುದ್ಧವಾಗಿ ೩೦ ಮತಗಳು ಬಿದ್ದಿವೆ. ಬಹುಮತ ಸಾಬೀತುಪಡಿಸಿದ ಹಿನ್ನೆಲೆ ಸಲೀಂ ಅಹ್ಮದ್ ಅವರನ್ನು ವಿಧಾನಪರಿಷತ್‌ನ ನೂತನ ಸಭಾಪತಿಯಾಗಿ ಅಧಿಕೃತವಾಗಿ ಘೋಷಿಸಲಾಯಿತು. ಬಳಿಕ, ಸಭಾನಾಯಕ ಡಾ.ಯತೀಂದ್ರ ಸಿದ್ದರಾಮಯ್ಯ, ವಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ, ಸೇರಿದಂತೆ ಹಲವು ಮುಖಂಡರು, ನೂತನ ಸಭಾಪತಿ ಸಲೀಂ ಅಹ್ಮದ್ ಅವರನ್ನು ಕರೆತಂದು ಪೀಠದಲ್ಲಿ ಕೂರಿಸಿ ಅಭಿನಂದಿಸಿದರು.

<><><>

ರಾಜ್ಯದ ಅಭಿವೃದ್ಧಿಗೆ ಆಡಳಿತ ಹಾಗೂ ಪ್ರತಿಪಕ್ಷಗಳು ಒಟ್ಟಾಗಿ ಕಾರ್ಯ ನಿರ್ವಹಿಸುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ. ವಿಧಾನಸಭೆಯಲ್ಲಿಂದು ಸಚಿವ ಸಂಪುಟದ ಸಹೋದ್ಯೋಗಿಗಳನ್ನು ಸದನಕ್ಕೆ ಪರಿಚಯಿಸಿ ಮಾತನಾಡಿದ ಅವರು, ತಮಗೆ ಸಿಕ್ಕಿರುವ ಅವಕಾಶದಲ್ಲಿ ಎಲ್ಲ ೨೨೪ ಶಾಸಕರು ಒಂದೇ. ಹೀಗಾಗಿ ವಿರೋಧ ಪಕ್ಷದವರನ್ನು ವಿಶ್ವಾಸಕ್ಕೆ ಪಡೆದು ಕಾರ್ಯ ನಿರ್ವಹಿಸುವುದಾಗಿ ತಿಳಿಸಿದ್ದಾರೆ. ನನ್ನ ಅಧಿಕಾರದಿಂದ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅನುಕೂಲವಾಗಬೇಕು. ಯಾರ ವಿರುದ್ಧವು ಅಧಿಕಾರ ಬಳಸುವುದಿಲ್ಲ ಎಂದು ಹೇಳಿದ್ದಾರೆ. ಇದೇ ವೇಳೆ ಸದನದಲ್ಲಿ ರಾಜ್ಯದ ಎಲ್ಲಾ ಮುಖ್ಯಮಂತ್ರಿಗಳನ್ನು ಸ್ಮರಿಸಿದ ಅವರು, ಎಲ್ಲರೂ ತಮ್ಮದೇ ಆದ ರೀತಿಯಲ್ಲಿ ನಾಡಿಗೆ ಕೊಡುಗೆ ನೀಡಿದ್ದಾರೆ ಎಂದು ಗುಣಗಾನ ಮಾಡಿದರು.

<><><>

ಗ್ರಾಮೀಣ ಉದ್ಯೋಗ ಖಾತರಿ ವಿಕಸಿತ ಭಾರತ ಜಿ ರಾಮ್ ಜಿ ಯಡಿ ಕೆಲಸ ಮಾಡಿದವರಿಗೆ ೧೫ ದಿನವಾದರೂ ಕೂಲಿ ಪಾವತಿಯಾಗದಿದ್ದರೆ ಸಂಬಂಧಿತ ಪಿಡಿಒಗಳನ್ನು ಹೊಣೆ ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ ಖಂಡ್ರೆ ಎಚ್ಚರಿಕೆ ನೀಡಿದ್ದಾರೆ. ವಿಕಾಸ ಸೌಧದಲ್ಲಿಂದು ಹಿರಿಯ ಅಧಿಕಾರಿಗಳು ಹಾಗೂ ಚಾಮರಾಜನಗರ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಈ ಯೋಜನೆಯಡಿ ೧೫ ರಿಂದ ೨೫ ದಿನವಾದರೂ ಹಣ ಬಾರದಿದ್ದರೆ ಜನರು ಕೆಲಸಕ್ಕೆ ಬರುವುದಿಲ್ಲ. ಈ ಹಿನ್ನೆಲೆಯಲ್ಲಿ ಕನಿಷ್ಠ ೭ ಗರಿಷ್ಟ ೧೦ದಿನಗಳವರೆಗೆ ಕೂಲಿ ಹಣ ಪಾವತಿಯಾಗುವಂತೆ ಕ್ರಮವಹಿಸಿ ಎಂದು ಸೂಚಿಸಿದ್ದಾರೆ. ಬೋಗಸ್ ಬಿಲ್ ಹಾಗೂ ಕಳಪೆ ಕಾಮಗಾರಿಗೆ ಅವಕಾಶವಿಲ್ಲ. ಇಂತಹ ದೂರುಗಳು ಬಂದರೆ ನಿರ್ದಾಕ್ಷಿಣ್ಯಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><>

೮೦ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಕೇಂದ್ರ ಗೃಹ ಸಚಿವಾಲಯ ರಾಜ್ಯ ಪೊಲೀಸ್ ಇಲಾಖೆಯ ೧೭ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ರಾಷ್ಟ್ರಪತಿ ಪದಕಗಳನ್ನು ಘೋಷಿಸಿದೆ. ಸಿಸಿಬಿಯ ಎಸಿಪಿ ಎಚ್.ಎನ್.ಧರ್ಮೇಂದ್ರ ಅವರಿಗೆ ರಾಷ್ಟ್ರಪತಿ ವಿಶಿಷ್ಟ ಸೇವಾ ಪದಕ ಲಭಿಸಿದೆ. ಉಳಿದಂತೆ ರೈಲ್ವೇಯ ಎಸ್.ಪಿ. ಸಾರಾ ಫಾತಿಮಾ, ಕೆ.ಎಸ್.ಆರ್.ಪಿ. ಕಮಾಂಡೆಂಟ್ ಥಾಮಸ್ ಮ್ಯಾಥ್ಯೂ, ಬೆಂಗಳೂರು ಆಗ್ನೇಯ ಸಂಚಾರ ವಿಭಾಗದ ಎಸಿಪಿ ಮಹದೇವ್, ರಾಯಚೂರು ಡಿಎಆರ್‌ನ ಡಿವೈಎಸ್‌ಪಿ ಪರಮಾನಂದ್, ಮೈಸೂರು ಪೊಲೀಸ್ ತರಬೇತಿ ಶಾಲೆಯ ಷಣ್ಮುಗವರ್ಮ, ಬೆಳಗಾವಿ ಮಾಳಮಾರುತಿ ಠಾಣೆಯ ಭಾವುದ್ದೀನ್ ರುಕ್ಮುದ್ದೀನ್ ಸೇರಿದಂತೆ ಒಟ್ಟು ೧೭ ಮಂದಿ ರಾಷ್ಟ್ರಪತಿ ಪದಕ ಪುರಸ್ಕಾರಕ್ಕೆ ಭಾಜನರಾಗಿದ್ದಾರೆ.

<><><>

ಮಹಿಳೆಯರಿಗೆ ಸಂಪುಟದಲ್ಲಿ ಸ್ಥಾನ ನೀಡಿಲ್ಲ ಎಂದು ಆರೋಪಿಸಿ ಬಿಜೆಪಿ ಶಾಸಕರು ಹಾಗೂ ಪರಿಷತ್ ಸದಸ್ಯರು ಇಂದು ವಿಧಾನಸೌಧದ ಮುಂದೆ ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕಾಂಗ್ರೆಸ್ ಪಕ್ಷವು ಮಹಿಳಾ ವಿರೋಧಿ ಧೋರಣೆ ಅನುಸರಿಸುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ರಾಜ್ಯದ ಇತಿಹಾಸದಲ್ಲಿ ಮಹಿಳಾ ಪ್ರಾತಿನಿಧ್ಯ ಇಲ್ಲದ ಮೊದಲ ಸಚಿವ ಸಂಪುಟ ಇದಾಗಿದೆ. ಈ ಸರ್ಕಾರದಲ್ಲಿ ಮಹಿಳೆಯರಿಗೆ ಆದ್ಯತೆ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿ ಸುಮಾರು ಶೇಕಡ ೫೦ರಷ್ಟು ಮಹಿಳೆಯರಿದ್ದರೂ ಸರ್ಕಾರ ಮಹಿಳೆಯರಿಗೆ ಸಂಪುಟದಲ್ಲಿ ಪ್ರಾತಿನಿಧ್ಯ ನಿರಾಕರಿಸುವ ಮೂಲಕ ಮಹಿಳೆಯರನ್ನು ಅವಮಾನಿಸಿದೆ ಎಂದು ಆರೋಪಿಸಿದ್ದಾರೆ.

<><><>

ವಸತಿ ಖಾತೆ ಸಚಿವ ಜಮೀರ್ ಅಹಮ್ಮದ್ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣದಿಂದ ವಿನಾಯಿತಿ ನೀಡುವಂತೆ ಮಾಡಿರುವ ಮನವಿಯನ್ನು ಬಿಜೆಪಿ ಖಂಡಿಸಿದೆ. ಸಚಿವ ಸಂಪುಟದಿಂದ ಅವರನ್ನು ಅಮಾನತುಗೊಳಿಸುವಂತೆ ಆಗ್ರಹಿಸಿದೆ. ತ್ರಿವರ್ಣ ಧ್ವಜಾರೋಹಣದಿಂದ ವಿನಾಯಿತಿ ಕೋರಿದ ಜಮೀರ್ ಅಹಮ್ಮದ್ ಅವರ ನಿರ್ಧಾರವು ದೇಶಕ್ಕೆ ತೋರಿದ ಅಗೌರವ ಎಂದು ಟೀಕಿಸಿದೆ.

<><><><>

೮೦ನೇ ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿಯವರ ಕರೆಯಂತೆ ದೇಶಾದ್ಯಂತ ಹಮ್ಮಿಕೊಳ್ಳಲಾಗಿರುವ 'ಹರ್ ಘರ್ ತಿರಂಗಾ' ಅಭಿಯಾನ ರಾಜ್ಯದ ವಿವಿಧೆಡೆ ನಡೆಯಿತು. ಚಿತ್ರದುರ್ಗದಲ್ಲಿ ಸಂಸದ ಗೋವಿಂದ ಎಂ.ಕಾರಜೋಳ ತಮ್ಮ ನಿವಾಸದಲ್ಲಿ ತ್ರಿವರ್ಣಧ್ವಜ ಹಾರಿಸುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದ ಪ್ರತಿಯೊಬ್ಬ ನಾಗರಿಕನೂ 'ಒಂದು ದೇಶ, ಒಂದು ಕುಟುಂಬ' ಎಂಬ ಭಾವನೆಯಿಂದ ತಮ್ಮ ಮನೆಗಳ ಮೇಲೆ ತ್ರಿವರ್ಣ ಧ್ವಜವನ್ನು ಹಾರಿಸಬೇಕು ಎಂದು ಮನವಿ ಮಾಡಿದರು. ಹುಬ್ಬಳ್ಳಿಯ ಉಣಕಲ್ ಕೆರೆಯಲ್ಲಿ ಜಿಲ್ಲಾಡಳಿತ ಹಾಗೂ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಸಹಯೋಗದಲ್ಲಿ ೮೦ ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಅಂಗವಾಗಿ 'ತಿರಂಗಾ ಓಟ' ಕಾರ್ಯಕ್ರಮ ಆಯೋಜಿಸಲಾಗಿತ್ತು. ಅಗ್ನಿಶಾಮಕ ದಳದವರು ಉಣಕಲ್ ಕೆರೆಯಲ್ಲಿ ತಿರಂಗಾ ಧ್ವಜವನ್ನು ಪ್ರದರ್ಶಿಸಿದರೆ, ಮಲ್ಲಕಂಬ ವಿದ್ಯಾರ್ಥಿಗಳು ವಿವಿಧ ಆಸನಗಳನ್ನು ಪ್ರದರ್ಶನ ಮಾಡಿದರು.

<><><><>

ಹಾನಗಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀನಿವಾಸ ಮಾನೆ ಅವರನ್ನು ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರನ್ನಾಗಿ ನೇಮಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪತ್ರ ಬರೆದಿದ್ದಾರೆ. ಸದ್ಯ ಸಚಿವರಾಗಿ ಅಧಿಕಾರ ವಹಿಸಿಕೊಂಡಿರುವ ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಮಂಡಳಿಯ ಅಧ್ಯಕ್ಷರಾಗಿದ್ದರು. ಸಚಿವ ಸ್ಥಾನದ ಅಕಾಂಕ್ಷಿಯಾಗಿದ್ದ ಶ್ರೀನಿವಾಸ ಮಾನೆ ಅವರಿಗೆ ಈಗ ಗೃಹ ಮಂಡಳಿಯ ಹೊಣೆ ನೀಡಲು ಮುಖ್ಯಮಂತ್ರಿ ಮುಂದಾಗಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>